ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ರಾಜೀವ್ ಗಾಂಧಿ ವಸತಿ ನಿಗಮದಿಂದ ಮನೆಗಳ ಹಂಚಿಕೆ ಕುರಿತು

ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):-

382 (02) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆವಿಗೆ ವಿಜಯಪುರ ಜಿಲ್ಲೆಯಾದ್ಯಂತ ರಾಜೀವ್ ಗಾಂಧಿ ವಸತಿ ನಿಗಮ ಮತ್ತು ಬಸವ ವಸತಿ ಯೋಜನೆ ಅಡಿಯಲ್ಲಿ ಆಯ್ಕೆಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಆಯ್ಕೆಯಾಗಿರುವ ಫಲಾನುಭವಿಗಳಿಗೆ ಎಷ್ಟು ಆಶ್ರಯ ಮನೆಗಳನ್ನು ನೀಡಲಾಗಿದೆ ; ಮತ್ತು ಆಯ್ಕೆಯಾಗಿದ್ದರೂ ಯಾವ ಕಾರಣಕ್ಕಾಗಿ ಫಲಾನುಭವಿಗಳಿಗೆ ಆಶ್ರಯ ಮನೆಗಳನ್ನು ಇದುವರೆವಿಗೂ ವಿತರಿಸಿರುವುದಿಲ್ಲ ; (ವಿವರ ನೀಡುವುದು)

(ಇ) ವಿತರಿಸದೆ ಇರುವ ಫಲಾನುಭವಿಗಳಿಗೆ ಎಷ್ಟು ಕಾಲಾವಧಿಯಲ್ಲಿ ಆಶ್ರಯ ಮನೆಗಳನ್ನು ವಿತರಿಸಲಾಗುವುದು ? (ವಿವರ ಒದಗಿಸುವುದು)